**ಕರ್ನಾಟಕ ಸರ್ಕಾರ**

# ಜಿಲ್ಲಾಧಿಕಾರಿಗಳ ಕಾರ್ಯಾಲಯ, ಹಾವೇರಿ ಜಿಲ್ಲೆ, ಹಾವೇರಿ

ನಂ.ಜಿನಕೋಹಾ/ಸಿಬ್ಬಂದಿ/ಸಿಆರ್–150/2017–18 ದಿನಾಂಕ : 30/05/2026

## ಪತ್ರಿಕಾ ಪ್ರಕಟಣೆ

1. ಹಾವೇರಿ ಜಿಲ್ಲೆಯ ನಗರಸಭೆ/ ಪುರಸಭೆ/ ಪಟ್ಟಣ ಪಂಚಾಯಿತಿಗಳಲ್ಲಿ ಖಾಲಿ ಇರುವ ಈ ಕೆಳಗಿನಂತೆ (ಲೋಡರ್ ಮತ್ತು ಕ್ಲೀನರ್ ಹುದ್ದೆಗಳನ್ನು) ವಿಶೇಷ ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಅರ್ಹ ಅಭ್ಯರ್ಥಿಗಳಿಂದ ನಿಗಧಿತ ನಮೂನೆಯಲ್ಲಿ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಅರ್ಜಿ ನಮೂನೆಗಳನ್ನು ಹಾವೇರಿ ಜಿಲ್ಲೆಯ ನಗರ ಸ್ಥಳೀಯ ಸಂಸ್ಥೆಗಳಲ್ಲಿ ಅರ್ಜಿಗಳನ್ನು ದಿನಾಂಕ : **30/06/2026** ರೊಳಗಾಗಿ ದಾಖಲಾತಿಗಳೊಂದಿಗೆ ಸಲ್ಲಿಸತಕ್ಕದ್ದು.

| ಕ್ರ. ಸಂ. | ಹುದ್ದೆಯ ಹೆಸರು | ಒಟ್ಟು ಹುದ್ದೆಗಳು | ಕನಿಷ್ಠ ವಿದ್ಯಾರ್ಹತೆ/ ಅರ್ಹತೆ | ವೇತನ ಶ್ರೇಣಿ |
|---|---|---|---|---|
| 1 | ಲೋಡರ್ ಮತ್ತು ಕ್ಲೀನರ್ | ಲೋಡರ್–60<br>ಕ್ಲೀನರ್ – 17<br>ಒಟ್ಟು – 77 | 1. ವಿದ್ಯಾರ್ಹತೆ ಅನ್ವಯಿಸುವುದಿಲ್ಲ.<br>2. ಕನ್ನಡ ಮಾತನಾಡಲು ಗೊತ್ತಿರಬೇಕು.<br>3. ಆಯಾ ನಗರ ಸ್ಥಳೀಯ ಸಂಸ್ಥೆಗಳಲ್ಲಿ ಲೋಡರ್/ ಕ್ಲೀನರ್ ಹುದ್ದೆಯಲ್ಲಿ ಕೆಲಸ ಮಾಡುತ್ತಿರುವ ಕ್ಷೇಮಾಭಿವೃದ್ಧಿ/ ದಿನಗೂಲಿ/ ಗುತ್ತಿಗೆ/ಹೊರ ಗುತ್ತಿಗೆ/ ಸಮಾನ ಕೆಲಸಕ್ಕೆ ಸಮಾನ ವೇತನ ಕಾರ್ಯದಡಿ ಹಾಲಿ ಕಾರ್ಯನಿರ್ವಹಿಸುತ್ತಿರುವ ಹಾಗೂ ಈ ನಿಯಮಗಳು ಜಾರಿಗೆ ಬಂದ ದಿನಾಂಕದಿಂದ ಪ್ರಸ್ತುತ ಕನಿಷ್ಠ 2 ವರ್ಷಗಳ ಸೇವೆಯಲ್ಲಿ ಮುಂದುವರೆದಿರುವ ನೌಕರರು ಮಾತ್ರ ಅರ್ಜಿ ಸಲ್ಲಿಸಲು ಅರ್ಹರಿರುತ್ತಾರೆ.<br>4. ಅರ್ಜಿ ಸಲ್ಲಿಸಲು ಕೊನೆಯ ದಿನಾಂಕದಂದು 18 ವರ್ಷ ಪೂರ್ಣಗೊಂಡಿದ್ದು, ಗರಿಷ್ಠ ವಯೋಮಿತಿ 55 ವರ್ಷ. | **27000–46675** |

**1. ಭರ್ತಿ ಮಾಡಿದ ಅರ್ಜಿಗಳನ್ನು ಸಲ್ಲಿಸುವ ಕಾಲಮಿತಿ.**

| ವಿವರ | ದಿನಾಂಕ | ಅರ್ಜಿ ನಮೂನೆ ಪಡೆಯುವ ವಿಳಾಸ |
|---|---|---|
| ಅರ್ಜಿ ಸಲ್ಲಿಸಲು ನಿಗಧಿಪಡಿಸಿರುವ ಪ್ರಾರಂಭಿಕ ದಿನಾಂಕ | **01/06/2026** | ಹಾವೇರಿ ಜಿಲ್ಲೆಯ ನಗರಸಭೆ ಹಾವೇರಿ/ ರಾಣೇಬೆನ್ನೂರು/ಪುರಸಭೆ ಬ್ಯಾಡಗಿ/ಹಾನಗಲ್ಲ/ ಸವಣೂರು/ಶಿಗ್ಗಾಂವ/ಬಂಕಾಪುರ/ಪಟ್ಟಣ ಪಂಚಾಯತ ಹಿರೇಕೆರೂರು/ಗುತ್ತಲ/ರಟ್ಟಿಹಳ್ಳಿ |
| ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ | **30/06/2026** | |

1. ಹೆಚ್ಚಿನ ಮಾಹಿತಿ ಹಾಗೂ ವಿವರವಾದ ಅಧಿಸೂಚನೆಯನ್ನು ಜಿಲ್ಲಾ ನಗರಾಭಿವೃದ್ಧಿ ಕೋಶ, ಜಿಲ್ಲಾಧಿಕಾರಿಗಳ ಕಛೇರಿ, ಹಾವೇರಿ ಮತ್ತು ಆಯಾ ನಗರಸಭೆ/ಪುರಸಭೆ/ಪಟ್ಟಣ ಪಂಚಾಯಿತಿಗಳಲ್ಲಿ ಮಾಹಿತಿಯನ್ನು ಪಡೆಯಬಹುದು.
2. ಅರ್ಜಿ ನಮೂನೆ ಪಡೆಯುವ ವಿಳಾಸ ಹಾವೇರಿ ಜಿಲ್ಲೆಯ ಆಯಾ ನಗರಸಭೆ/ಪುರಸಭೆ/ಪಟ್ಟಣ ಪಂಚಾಯಿತಿ.
3. ಈ ನೇಮಕಾತಿಯು ಸರ್ಕಾರದ/ಪೌರಾಡಳಿತ ನಿರ್ದೇಶನಾಲಯದಿಂದ ಕಾಲ ಕಾಲಕ್ಕೆ ಹೊರಡಿಸುವ ಆದೇಶ/ ಸುತ್ತೋಲೆಯ ಷರತ್ತುಗೊಳಪಟ್ಟಿದೆ.

**ಸಹಿ/– ಅಧ್ಯಕ್ಷರು, ಆಯ್ಕೆ ಮತ್ತು ನೇರ ನೇಮಕಾತಿ ಪ್ರಾಧಿಕಾರ**
**ಹಾಗೂ ಜಿಲ್ಲಾಧಿಕಾರಿಗಳು, ಹಾವೇರಿ ಜಿಲ್ಲೆ.**

ವಾಸಾಸಂಇ/ಹಾವೇರಿ/ಕೆಎಸ್ಎಂಸಿಎ/137/2026–27